## ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಕಿತ್ತೂರ.

ದಿನಾಂಕಃ 10.06.2026 ರಂದು ಆರ್.ಡಬ್ಲ್ಯೂ-1 ರವರನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರೆದ ಪಾಟೀ ಸವಾಲುಃ ಶ್ರೀ ವಿ ಜಿ ಬಿ ವಕೀಲರಿಂದಃ**

4. ನನ್ನ ತಾಯಿ ಐದು ವರ್ಷಗಳ ಹಿಂದೆ ತೀರಿಕೊಂಡಿರುತ್ತಾರೆ ಎಂದರೆ ಸರಿ. ಅರ್ಜಿದಾರರನ್ನು ನೋಡಿಕೊಳ್ಳಲು ಬೇರೆ ಯಾರು ಇಲ್ಲ ಎಂದರೆ ಸರಿ. ಅರ್ಜಿದಾರರು ತಮ್ಮ ಊಟೋಪಚಾರಕ್ಕೆ ಅಂಗಡಿಯಿಂದ ತರಿಸಿಕೊಳ್ಳುತ್ತಾರೆ ಎಂದರೆ ಸರಿ. ನನ್ನ ಇನ್ನೊಬ್ಬ ಸಹೋದರನ ಹೆಸರಿನಲ್ಲಿ ಯಾವುದೇ ಆಸ್ತಿಗಳು ಇಲ್ಲ ಎಂದರೆ ಸರಿ. ಸದರಿಯವರು ಯಾವುದೇ ಉದ್ಯೋಗ ಮಾಡುವುದಿಲ್ಲ ಎಂದರೆ ಸರಿ. ಸದರಿಯವರು ದೈಹಿಕವಾಗಿ ಸಾಮರ್ಥ್ಯರಿಲ್ಲ ಎಂದರೆ ಸರಿಯಲ್ಲ. ಸದರಿಯವರು ಸರಿಯಾಗಿ ನಡೆಯಲು ಬರುವುದಿಲ್ಲ ಎಂದರೆ ಸರಿಯಲ್ಲ. ನನ್ನ ಪ್ರಕಾರ ಸದರಿಯವರು ಆರೋಗ್ಯವಾಗಿದ್ದಾರೆ ಮತ್ತು ಅವರ ಮಗಳು ನೌಕರಿ ಮಾಡುತ್ತಾರೆ. ಸದರಿ ಮಗಳನ್ನು ಮದುವೆ ಮಾಡಿಕೊಟ್ಟಿದ್ದಾರೆ. ಈಗ ಪುನಾದಲ್ಲಿ ಕೆಲಸ ಮಾಡುತ್ತಾ ವಾಸ ಮಾಡುತ್ತಿದ್ದಾರೆ. ಸದರಿಯವರ ಮಕ್ಕಳ ಮದುವೆಯನ್ನು ಅರ್ಜಿದಾರರು ಮಾಡಿದ್ದಾರೆ ಎಂದರೆ ಸರಿಯಲ್ಲ, ಸಾಕ್ಷಿ ನಾವು ಎಲ್ಲರೂ ಸ್ವಲ್ಪ ಹಣ ಹಾಕಿ ಮಾಡಿದ್ದೇವೆ ಎನ್ನುತ್ತಾರೆ. ಸದರಿ ವಿಚಾರವನ್ನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಸದರಿ ಸಹೋದರ ಕೆಲಸ ಮಾಡುವುದು ಬಿಟ್ಟು 25-30 ವರ್ಷಗಳಾದವು. ಸದರಿಯವರನ್ನು ಅರ್ಜಿದಾರರೇ

ನೋಡಿಕೊಳ್ಳುತ್ತಿದ್ದಾರೆ ಎಂದರೆ ಸರಿ. ನಾನು ಕೊಟ್ಟ ಜೀವನಾಂಶನಲ್ಲಿ ನೋಡಿಕೊಳ್ಳುತ್ತಾರೆ.

**(ಮರು ವಿಚಾರಣೆ ಇರುವುದಿಲ್ಲ.)**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಿರುತ್ತೇನೆ.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಒಪ್ಪಿರುತ್ತಾರೆ.

(ಮಹಮ್ಮದ ಅಲಿ ನಾಯಕ)
ದಿವಾಣಿ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂ.ಕಿತ್ತೂರ.